ಡಿ.14ರಂದು ರಾಷ್ಟ್ರೀಯ ಲೋಕ ಅದಾಲತ್

ಕಳೆದ ಅದಾಲತ್‌ನಲ್ಲಿ 34470 ಪ್ರಕರಣಗಳು ಇತ್ಯರ್ಥ: ನ್ಯಾ.ಮಂಜುನಾಥ

ಉದಯಕಾಲ ನ್ಯೂಸ್

ಕೋಲಾರ: ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಡಿ.14 ರಂದು ರಾಷ್ಟ್ರೀಯ ಜನತಾ ನ್ಯಾಯಾಲಯ ನಡೆಯಲಿದ್ದು, ರಾಜೀ ಮೂಲಕ ಪ್ರಕರಣಗಳು ಇತ್ಯರ್ಥ ಪಡಿಸಿಕೊಳ್ಳಲು ಮುಂದಾಗಿ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಎ.ಮಂಜುನಾಥ ಕರೆ ನೀಡಿದರು.

ಈ ಕುರಿತು ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡ ಅವರು, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ದೆಹಲಿ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ನಿರ್ದೇಶನದಂತೆ ಜಿಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಬಂಗಾರಪೇಟೆ, ಶ್ರೀನಿವಾಸಪುರ, ಮಾಲೂರು, ಮುಳಬಾಗಿಲು, ಕೆಜಿಎಫ್ ತಾಲೂಕು ನ್ಯಾಯಾಲಯಗಳಲ್ಲಿ ಡಿ.14ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ರಾಷ್ಟ್ರೀಯ ಜನತಾ ನ್ಯಾಯಾಲಯ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಳೆದ ಸೆ.14 ರಂದು ಜಿಲ್ಲೆಯ ನ್ಯಾಯಾಲಯಗಳಲ್ಲಿ ನಡೆಸಲಾದ ಜನತಾ ನ್ಯಾಯಾಲಯದಲ್ಲಿ ಒಟ್ಟು 34470 ಪ್ರಕರಣಗಳು ರಾಜೀ ಮೂಲಕ ಇತ್ಯರ್ಥಗೊಂಡಿದ್ದು, ನ್ಯಾಯಾಲಯದಲ್ಲಿ 125,75,91,729 ರೂ.ಪರಿಹಾರದ ಹಣ

ಪಾವತಿಯಾಗಿರುತ್ತದೆ ಎಂದು ಹೇಳಿದರು.

ಉಭಯ ಪಕ್ಷಗಾರರು, ವಕೀಲರು ಪೂರ್ವ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ಪ್ರಕರಣಗಳನ್ನು ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶವಿರುತ್ತದೆ. ಈ ಪರ್ಯಾಯ ನ್ಯಾಯ ವಿತರಣೆ ಜನಮನ್ನಣೆ ಗಳಿಸಿದ್ದು, ರಾಜೀ ಮಾಡಿಕೊಳ್ಳಲು ಮುಕ್ತ ಅವಕಾಶವಿದೆ ಎಂದು ತಿಳಿಸಿದ ಅವರು, ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಪ್ರಕರಣ ರಾಜೀ ಮಾಡಿಕೊಳ್ಳಲು ಇಚ್ಛಿಸುವ ಪಕ್ಷಗಾರರು ಮುಂಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲೂಕು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದರು.

ರಾಷ್ಟ್ರೀಯ ಜನತಾ ನ್ಯಾಯಾಲಯದ ಪ್ರಯೋಜನಗಳು: ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯಗಳಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್ ಹೊಸಮನಿ ಹಾಜರಿದ್ದು, ರಾಷ್ಟ್ರೀಯ ಲೋಕ್ ಅದಾಲತ್‌ನ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ಕಕ್ಷಿದಾರರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಯಾವ್ಯಾವ ಪ್ರಕರಣ ಇತ್ಯರ್ಥಕ್ಕೆ ಅವಕಾಶ

ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಿವಿಲ್ ಪ್ರಕರಣಗಳು, ರಾಜೀಯಾಗುವ ಕ್ರಿಮಿನಲ್ ಪ್ರಕರಣಗಳು, ಚೆಕ್ ಬೌನ್ಸ್, ಮೋಟಾರ್ ವಾಹನ ಅಪಘಾತ, ಬ್ಯಾಂಕ್ ವಸೂಲಾತಿ, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವೈವಾಹಿಕ-ಕುಟುಂಬ ನ್ಯಾಯಾಲಯದ ಪ್ರಕರಣಗಳು, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳನ್ನು ರಾಜೀ ಮಾಡಿಕೊಳ್ಳುವ ಅವಕಾಶವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ನ್ಯಾಯಾಧೀಶ ಮಂಜುನಾಥ ಅವರು ಕೋರಿದ್ದಾರೆ.

ಚುಟುಕು ಸುದ್ದಿ

ಕೀಟನಾಶಕ ಅಂಗಡಿ ಮೇಲೆ ದಾಳಿ ನಿಷೇಧಿತ ಕೀಟನಾಶಕಗಳ ಜಪ್ತಿ

ಉದಯಕಾಲ ನ್ಯೂಸ್

ಗುಡಿಬಂಡೆ: ಸಹಾಯಕ ಕೃಷಿ ನಿರ್ದೇಶಕ ಹಾಗೂ ಕೃಷಿ ಇಲಾಖೆಯ ಜಾರಿ ದಳ ಅಧಿಕಾರಿ ಕೆ.ಪ್ರಮೋದ್ ಬಾಬು ನೇತೃತ್ವದಲ್ಲಿ ಗುಡಿಬಂಡೆ ಪಟ್ಟಣದ ಎಸ್‌ಎಸ್‌ಬಿ ಎಂಟರ್ ಪ್ರೈಸೆಸ್ ರಸಗೊಬ್ಬರ ಮಾರಾಟ ಮಳಿಗೆಯ ಮೇಲೆ ದಾಳಿ ನಡೆಸಿ, ಸುಮಾರು 30 ಸಾವಿರ ಬೆಲೆಯ ನಿಷೇಧಿತ ಕೀಟನಾಶಕಗಳನ್ನು ಜಪ್ತಿ ಮಾಡಿದ್ದಾರೆ.

ಈ ವೇಳೆ ಮಾತನಾಡಿದ ಕೃಷಿ ಇಲಾಖೆಯ ಜಾರಿ ದಳ ಅಧಿಕಾರಿ ಕೆ.ಪ್ರಮೋದ್ ಬಾಬು ಅವರು, ಪ್ರತಿಯೊಂದು ಕೀಟನಾಶಕವನ್ನು ಕೇಂದ್ರಿಯ ಕೀಟನಾಶಕ ಮಂಡಳಿಯಲ್ಲಿ ನೋಂದಾಯಿಸಬೇಕು. ಅವರಿಂದ ನೋಂದಾಯಿತ ಸಂಖ್ಯೆಯನ್ನು ಪಡೆದು, ಕೀಟನಾಶಕ ವಿಷಕಾರಿ ಅಂಶ ಕುರಿತು ಮಾಹಿತಿಯನ್ನು ಆಳವಡಿಸಿಕೊಂಡು ಕೀಟನಾಶಕಗಳನ್ನು ಮಾರಾಟ ಮಾಡಬೇಕಾಗುತ್ತದೆ ಎಂದರು.

ದಾಳಿಯಲ್ಲಿ ಎಸ್‌ಎಸ್‌ಬಿ ಎಂಟರ್ ಪ್ರೈಸೆಸ್‌ನಲ್ಲಿ ದೊರೆತ 30 ಸಾವಿರ ಮೌಲ್ಯದ ನಿಷೇಧಿತ ಕೀಟನಾಶಕಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಸಂಬಂಧಪಟ್ಟವರ ಮೇಲೆ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಗುತ್ತದೆ ಎಂದು ತಿಳಿಸಿದರು.

ಈ ಸಮಯದಲ್ಲಿ ಗುಡಿಬಂಡೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಕೇಶವರೆಡ್ಡಿ, ಕೃಷಿ ಅಧಿಕಾರಿ ಎನ್.ಶಂಕರಯ್ಯ ಸೇರಿದಂತೆ ಸಿಬ್ಬಂದಿ ಹಾಜರಿದ್ದರು.

ಟೀಕಿಸಲು ವಿರೋಧ ಪಕ್ಷದವರಿಗೆ ನೈತಿಕತೆ ಇಲ್ಲ: ಶಾಸಕ ಗಣೇಶ್ ಪ್ರಸಾದ್

ಉದಯಕಾಲ ನ್ಯೂಸ್

ಗುಂಡ್ಲುಪೇಟೆ: ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಗಣೇಶ್ ಪ್ರಸಾದ್ ಅವರು ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಹಿರಿಕಾಟಿ ಗ್ರಾಮದಲ್ಲಿ ನಮ್ಮ ಕ್ರಷರ್‌ಗೆ ಹೋಗುವ ರಸ್ತೆಯ ನಿರ್ಮಾಣ ವಿಷಯದಲ್ಲಿ ವಿರೋಧ ಹಾಗೂ ನಮ್ಮ ಟ್ರಸ್ಟ್‌ನ ಸ್ಥಳದ ಬಗ್ಗೆ ಹಿರಿಕಾಟಿ ಗ್ರಾಮದಲ್ಲಿ ಮಾತನಾಡುವವರು ಹಾಲಹಳ್ಳಿ ಗ್ರಾಮದಲ್ಲಿ ಮಾತನಾಡಿದರೆ ನಾನು ಉತ್ತರ ನೀಡಲು ಸಿದ್ಧ ಎಂದು ಹೇಳುವ ಮೂಲಕ ವಿರೋಧ ಪಕ್ಷದವರ ಟೀಕೆಗಳಿಗೆ ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ತಿರುಗೇಟು ನೀಡಿದರು.

ಸರ್ಕಾರದ ಶಿಷ್ಟಾಚಾರ ಮತ್ತು ನಿಯಮದ ಬಗ್ಗೆ ತಿಳಿಯದ ವಿರೋಧ ಪಕ್ಷದವರಿಗೆ ಟೀಕಿಸಲು ನೈತಿಕತೆ ಇಲ್ಲ. ಅವರ ಅವಧಿಯಲ್ಲಿ ಉದ್ಘಾಟನೆಗೊಂಡ ಯಾವುದೇ ಕಾರ್ಯಕ್ರಮಕ್ಕೆ ನಮ್ಮ ಪ್ರವೇಶ ಇರಲಿಲ್ಲ. ಆದರೆ, ಅವರು ಇದೀಗ ಕ್ಷೇತ್ರದಲ್ಲಿ ನಡೆದುಕೊಳ್ಳುತ್ತಿರುವ ರೀತಿ ಎಲ್ಲರಿಗೂ ತಿಳಿದಿದೆ ಹಾಗಾಗಿ ಅವರಿಗೆ ಸಾಮಾನ್ಯ ಜ್ಞಾನ ಇಲ್ಲದಂತಾಗಿದೆ ಎಂದರು.

ಈಗಾಗಲೇ ಕ್ಷೇತ್ರಕ್ಕೆ 150 ಕೋಟಿಗೂ ಹೆಚ್ಚು ಅನುದಾನ ತಂದಿದ್ದೇನೆ. ತಾಲೂಕಿನ ವ್ಯಾಪ್ತಿಯಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು, ಇನ್ನೂ ಕೆಲವು ಟೆಂಡರ್ ಹಂತದಲ್ಲಿದೆ ಎಂದರು.

ವಿರೋಧ ಪಕ್ಷದವರು ತಾವು ಟೀಕಿಸುತ್ತಿರುವ ಟೀಕೆಗಳಲ್ಲಿ ಯಾವುದೇ ನಿಜಾಂಶವಿಲ್ಲ, ಬಿಜೆಪಿ ಪಕ್ಷ ನಮ್ಮದು ಎಂಬ ಭ್ರಮೆ ಹಾಗೂ ಪಕ್ಷ ಮೆಚ್ಚಿಸುವ ನಿಟ್ಟಿನಲ್ಲಿ ವಿನಾಕಾರಣ ಕೆಲಸಕ್ಕೆ ಬಾರದ ಟೀಕೆಗಳನ್ನು ಮಾಡುತ್ತಿದ್ದಾರೆ. ಅಧಿಕಾರ ಇಲ್ಲದೆ ಚಿಂತೆಗೆ ಈಡಾಗಿದ್ದಾರೆ ಎಂದು ಟಾಂಗ್ ನೀಡಿದರು.

ಸಮಸ್ಯೆಗೆ ಪರಿಹಾರ ಕಲ್ಪಿಸಲು ವಾರ್ಡ್‌ಗಳಿಗೆ ಭೇಟಿ: ಶ್ರೀನಿವಾಸ್

ಉದಯಕಾಲ ನ್ಯೂಸ್

ಬಾಗೇಪಲ್ಲಿ: ಪುರಸಭೆ ವ್ಯಾಪ್ತಿಯಲ್ಲಿರುವ ಜನ ಸಾಮನ್ಯರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ವಾರ್ಡ್‌ಗಳಿಗೆ ಭೇಟಿ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು, ವಾರಕ್ಕೆ ಎರಡು ಬಾರಿ ಅಧಿಕಾರಿಗಳೊಂದಿಗೆ ವಾರ್ಡ್‌ಗಳಿಗೆ ಭೇಟಿ ನೀಡಲಿದ್ದೇವೆಂದು ಪುರಸಭೆ ಅಧ್ಯಕ್ಷ ಶ್ರೀನಿವಾಸ್ ತಿಳಿಸಿದರು.

ಬಾಗೇಪಲ್ಲಿ ಪಟ್ಟಣದ 23 ಮತ್ತು 16ನೇ ವಾರ್ಡ್‌ಗಳಿಗೆ ಪುರಸಭೆ ಅಧ್ಯಕ್ಷರು, ಅಧಿಕಾರಿಗಳು, ವಾರ್ಡ್‌ನ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಭೇಟಿ ನೀಡಿ ಸ್ವಚ್ಛತೆ, ಕುಡಿಯುವ ನೀರಿನ ಸಮಸ್ಯೆ, ಬೀದಿ ದೀಪಗಳ ವ್ಯವಸ್ಥೆ ಸೇರಿದಂತೆ ಇತರೆ ಮೂಲ ಸೌಕರ್ಯಗಳ ಬಗ್ಗೆ ನಾಗರಿಕರಿಂದ ಮಾಹಿತಿ ಪಡೆದುಕೊಂಡು, ವೈಜ್ಞಾನಿಕ ಪರಿಹಾರ ಕಲ್ಪಿಸುವ ಭರವಸೆ ನೀಡಿ ಅವರು ಮಾತನಾಡಿದರು.

ಬಾಗೇಪಲ್ಲಿ ಪುರಸಭೆಯ ಹಲವು ವಾರ್ಡ್‌ಗಳಲ್ಲಿ ಉದ್ಭವಿಸಿರುವ ರಸ್ತೆ ಮತ್ತು ಚರಂಡಿ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಶಾಸಕ ಸುಬ್ಬಾರೆಡ್ಡಿ ಮಾಗದರ್ಶನದಲ್ಲಿ ಪುರಸಭೆ ಸಿದ್ಧವಾಗಿದೆ ಎಂದು ತಿಳಿಸಿದರು.

23 ವಾರ್ಡ್‌ನಲ್ಲಿರುವ ಎರ್ರ ಕಾಲುವೆ ಕಾಮಗಾರಿ ಅವೈಜ್ಞಾನಿಕವಾಗಿದ್ದು, ಹೊಸದಾಗಿ ಕಾಲುವೆ ನಿರ್ಮಿಸಿದರೆ ಮಾತ್ರ ಚರಂಡಿ ನೀರು ಮುಂದಕ್ಕೆ ಹರಿಯಲಿದೆ. ಇಲ್ಲದಿದ್ದರೆ ಮನೆಗಳಿಗೆ ನುಗ್ಗಲಿವೆ ಎಂದು ಸಾರ್ವಜನಿಕರು ಮಾಹಿತಿ ನೀಡಿದ್ದು, ನೂತನ ಕಾಮಗಾರಿ ಮಂಜೂರಾತಿಗೆ ಶಾಸಕರಲ್ಲಿ ಪ್ರಸ್ತಾವನೆ ಸಲ್ಲಿಸುತ್ತೇವೆ ಎಂದರು.

ಕುಡಿಯುವ ನೀರಿನ ಪೈಪ್ ಲೈನ್, ಸ್ವಚ್ಛತೆ ಸೇರಿದಂತೆ ವಿವಿಧ ಬಗೆಯ ಮೂಲ ಸೌಕರ್ಯಗಳ ಬಗ್ಗೆಯೂ ನಾಗರಿಕರು ದೂರು ನೀಡಿದ್ದು, ಸಮಸ್ಯೆಗಳ ಪರಿಹಾರಕ್ಕೆ ಆಗತ್ಯ ಕ್ರಮ ಕೈಗೊಳ್ಳುವಂತೆ ಪುರಸಭೆ ಅಧಿಕಾರಿಗಳಿಗೆ, ಸಿಬ್ಬಂದಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಬಿ.ಆರ್.ನರಸಿಂಹನಾಯ್ಡು, ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್, ಆರೋಗ್ಯ ನಿರೀಕ್ಷಕಿ ಉಷಾ, ಕಂದಾಯ ಅಧಿಕಾರಿ ಷೇಕ್ ಅತಾವುಲ್ಲಾ, ಸಿಬ್ಬಂದಿ ಕೃಷ್ಣಪ್ಪ, ಸದಸ್ಯೆ ಪದ್ಮ ಮಲ್ಲೇಶ್, ಕರವೇ ಸೀನಾ ಮತ್ತಿತರರು ಇದ್ದರು.

ರೈಲ್ವೇ ಮೇಲ್ಸೇತುವೆಗೆ ಅನುದಾನ ಬಿಡುಗಡೆಗೆ ಆಗ್ರಹ

ಮಾಜಿ ಸಚಿವ ರೇವಣ್ಣ ಒತ್ತಾಯ: ದುದ್ದ ಬಳಿಯೂ ಫ್ಲೈ ಓವರ್

ಉದಯಕಾಲ ನ್ಯೂಸ್

ಹಾಸನ: ನಗರದ ಹೊಸ ಬಸ್ ನಿಲ್ದಾಣದ ಎದುರಿನ ಫ್ಲೈ ಓವರ್ ಕಾಮಗಾರಿ ಪೂರ್ಣಗೊಳಿಸಲು ತನ್ನ ಪಾಲಿನ ಬಾಕಿ ಹಣವನ್ನು ರಾಜ್ಯ ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕು ಎಂದು ಮಾಜಿ ಸಚಿವ ಎಚ್.ಡಿ.ರೇವಣ್ಣ ಆಗ್ರಹಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 98 ಕೋಟಿ ವೆಚ್ಚದ ಯೋಜನೆ ಕಳೆದ 10 ವರ್ಷಗಳಿಂದ ನನೆಗುದಿಗೆ ಬಿದ್ದಿತ್ತು. ನಾನು ಅಧಿಕಾರಕ್ಕೆ ಬಂದ ನಂತರ ಚಾಲನೆ ನೀಡಿದೆ ಎಂದು ಹೇಳಿದರು.

ಮೊದಲು 2 ಪಥದ ಮೇಲ್ಸೇತುವೆ ಮಾಡಲು ಯೋಜನೆ ರೂಪಿಸಲಾಗಿತ್ತು. ನಂತರ ನಾಲ್ಕು ಪಥ ಮಾಡಲು ನಿರ್ಧರಿಸಲಾಯಿತು ಎಂದರು.

ಸದರಿ ಯೋಜನೆಗೆ ರಾಜ್ಯ ಸರ್ಕಾರ ತನ್ನ ಪಾಲಿನ 68 ಕೋಟಿ ಕೊಡಬೇಕಿತ್ತು. ನಾನು ಮಂತ್ರಿಯಾಗಿದ್ದಾಗ 18 ಕೋಟಿ ರೂ.ಗಳನ್ನು ಭೂ ಸ್ವಾಧೀನಕ್ಕೆ ಕೊಡಿಸಿದ್ದೆ.

ಅದಾದ ಬಳಿಕ 43 ಕೋಟಿ ನೀಡಲಾಗಿತ್ತು. ಇನ್ನೂ 25 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಕೊಡಬೇಕಿದ್ದು, ಕೂಡಲೇ ಅದನ್ನು ಬಿಡುಗಡೆ ಮಾಡಲಿ ಎಂದು ಆಗ್ರಹಿಸಿದರು. 25 ಕೋಟಿ ಕೊಡಲು ಕಳೆದ ಒಂದೂವರೆ ವರ್ಷದಿಂದ ಸತಾಯಿಸಲಾಗುತ್ತಿದೆ. ಒಂದು ವೇಳೆ ರಾಜ್ಯ ಸರ್ಕಾರ ಎಲ್ಲವನ್ನೂ ಗ್ಯಾರಂಟಿಗೆ ಹೂಡಿಕೆ ಮಾಡಿದ್ದೇವೆ, ನಮ್ಮ ಬಳಿ ಹಣ ಇಲ್ಲ, ಕೊಡುವುದಿಲ್ಲ ಎಂದರೆ ಕೇಂದ್ರದ ಮನವೊಲಿಸಿ ನಾವೇ ಕಾಮಗಾರಿ ಮಾಡುತ್ತೇವೆ ಎಂದು ಹೇಳಿದರು.

ಇದೀಗ ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿ ಮೇಲ್ಸೇತುವೆ ಕಾಮಗಾರಿ ಸಂಬಂಧ 18 ಕೋಟಿ ಹಾಗೂ ಮತ್ತೊಂದು ಅಂಡರ್ ಪಾಸ್ ನಿರ್ಮಾಣಕ್ಕೆ 5 ಕೋಟಿ ಮೊತ್ತದ ಟೆಂಡರ್ ಕರೆಯಲಾಗಿದೆ ಎಂದು ರೇವಣ್ಣ ಹೇಳಿದರು.

ಇದೇ ರೀತಿ ದುದ್ದ ಬಳಿ ಎರಡು ಪಥದ ಮೇಲ್ಸೇತುವೆ ನಿರ್ಮಾಣಕ್ಕೆ 63.70 ಕೋಟಿ ರೂ. ವೆಚ್ಚದ ಯೋಜನೆ ರೂಪಿಸಲಾಗಿದೆ. ಭವಿಷ್ಯದ ದೃಷ್ಟಿಯಿಂದ 4 ಪಥವಾಗಿ ಬದಲಾಯಿಸಲು 150 ಕೋಟಿ ಆಗಲಿದ್ದು, ಆ ನಿಟ್ಟಿನಲ್ಲೂ ಯೋಚಿಸಲಾಗುತ್ತಿದೆ ಎಂದರು. ಹಾಗೆಯೇ ದುದ್ದ-ಹಾಸನ ನಡುವೆ 4 ಪಥ ರಸ್ತೆ ಮಾಡಲಾಗುವುದು ಎಂದು ತಿಳಿಸಿದರು. ಮೊಸಳೆ ಹೊಸಹಳ್ಳಿ ಇಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲ ಆಗುವಂತೆ ಅಂಡರ್‌ಪಾಸ್ ನಿರ್ಮಿಸಲಾಗುವುದು. ಹಾಸನದ ಡೇರಿ ಬಳಿಯ ಅಂಡರ್ ಪಾಸನ್ನೂ ಆಗಲೀಕರಣ ಮಾಡಲಾಗುವುದು. ಹಂಗರಹಳ್ಳಿ ಬಳಿ 2ನೇ ಪಥದ ಮೇಲ್ಸೇತುವೆಗೆ 29 ಕೋಟಿ ವೆಚ್ಚದ ಟೆಂಡರ್ ಕರೆಯಲಾಗಿದೆ ಎಂದರು. ಹಾಸನ-ಬೇಲೂರು ರೈಲುಮಾರ್ಗ ಭೂ ಸ್ವಾಧೀನ ಯೋಜನೆ ಕಳೆದ ಐದು ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ.

ಸಾರ್ವಜನಿಕರ ಸಮಸ್ಯೆಗಳಿಗೆ ಜನಸ್ಪಂದನವೇ ಆಧಾರ: ಶಾಸಕ ಪುಟ್ಟಸ್ವಾಮಿಗೌಡ

ಉದಯಕಾಲ ನ್ಯೂಸ್

ಗೌರಿಬಿದನೂರು: ನಗರದ ಹೊರವಲಯದಲ್ಲಿರುವ ತಾಲೂಕು ಕಚೇರಿಯ ಸಭಾಂಗಣದಲ್ಲಿ ಬುಧವಾರ ಶಾಸಕ ಕೆ.ಎಚ್. ಪುಟ್ಟಸ್ವಾಮಿಗೌಡ ಅಧ್ಯಕ್ಷತೆಯಲ್ಲಿ ಜನಸ್ಪಂದನಾ ಕಾರ್ಯಕ್ರಮ ಆಯೋಜಿಸಲಾಗಿತ್ತು, ಕಾರ್ಯಕ್ರಮದಲ್ಲಿ 30 ಅರ್ಜಿಗಳು ಬಂದಿದೆ ಎಂದು ತಿಳಿಸಿದರು.

ಇದೆ ವೇಳೆ ಸುದ್ದಿಗಾರೊಂದಿಗೆ ಮಾತಾನಾಡಿದ ಅವರು, ಜನಸ್ಪಂದನಾ ಕಾರ್ಯಕ್ರಮದಲ್ಲಿ 30ಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದು ನಗರಸಭೆ, ತಾಲೂಕು ಪಂಚಾಯಿತಿ, ತಾಲೂಕು ಕಚೇರಿಗಳಲ್ಲಿ ಶೇ.90ರಷ್ಟು ಬಗೆಹರಿಸಬಹುದಾದ ಅರ್ಜಿಗಳು ಬಂದಿದೆ ಮತ್ತು ನಗರಸಭೆಯ ವಾರ್ಡ್‌ಗಳಲ್ಲಿ ವಿವಿಧ ಕಾಮಗಾರಿಗಳನ್ನು ವೀಕ್ಷಣೆ ಮಾಡಲಾಯಿತು ಹಾಗೂ ನಗರಸಭೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಕಾಟ ಹೆಚ್ಚಾಗಿದ್ದು ಮಂಗಳವಾರದಂದು 17 ಮಂದಿಗೆ ಕಚ್ಚಿರುವುದು ತಿಳಿದು ಬಂದಿದೆ ಹಾಗಾಗಿ ನಗರದಲ್ಲಿ ಹುಚ್ಚು ನಾಯಿಗಳು ಯಾವುದೆಂದು ಪತ್ತೆ ಹಚ್ಚಿ ಚುಚ್ಚುಮದ್ದು ನೀಡಿ ಕಚ್ಚದಂತೆ ಅಥವಾ ಕಾನೂನಿನಲ್ಲಿ ಯಾವ ರೀತಿ ಮಾಡಬಹುದು ಆ ರೀತಿ ಕ್ರಮ ಕೈಗೊಳ್ಳಲಾಗುವುದು ಅಂತಹ ನಾಯಿಗಳನ್ನು ಸೆರೆಹಿಡಿದು ಜನರಲ್ಲಿ ಇರುವಂತಹ ಆತಂಕವನ್ನು ದೂರ ಮಾಡುವ ಕೆಲಸವನ್ನು ಖಂಡಿತ ಮಾಡುತ್ತೇವೆ ಎಂದರು.

ನಗರದ ಅರವಿಂದ ನಗರ ಹಾಗೂ ಮುನೇಶ್ವರ ಬಡಾವಣೆಯಲ್ಲಿ ಚರಂಡಿ ಕಾಮಗಾರಿಯನ್ನು ಅವೈಜ್ಞಾನಿಕವಾಗಿ ನಗರಸಭೆ ರವರು ನಿರ್ಮಾಣ ಮಾಡಲು ಮುಂದಾಗಿದ್ದನ್ನು ತಡೆದು ಸೂಕ್ತ ರೀತಿಯಲ್ಲಿ ಕಾಮಗಾರಿ ಮಾಡಬೇಕು ಎಂದು ಶಾಸಕರಿಗೆ ಅರವಿಂದ್ ನಗರದ ವಾಸಿಗಳು ಶಾಸ